ಅ) ಹೌದು

ಆ) ನಿಖರವಾದ ಅವಧಿಯನ್ನು ಸೂಚಿಸಲು ಕಷ್ಟ ಸಾಧ್ಯ

ಇ) ವರದಿಗಳು ಇನ್ನೂ ಸರ್ಕಾರದ ಪರಿಶೀಲನೆಯಲ್ಲಿದೆ.

ಬಸವಕಲ್ಯಾಣ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು

1270 - ಶ್ರೀ ಬಸವರಾಜ್ ಪಾಟೀಲ್ ಅಟ್ಟೂರು (ಬಸವಕಲ್ಯಾಣ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಪಟ್ಟಣದಲ್ಲಿ ಒಳಚರಂಡಿ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಇದನ್ನು ಯಾವಾಗ ಮಂಜೂರು ಮಾಡಲಾಯಿತು?

ಇ) ಇದಕ್ಕೆ ತಗಲುವ ವೆಚ್ಚವೆಷ್ಟು?

ಈ) ಬಸವಕಲ್ಯಾಣ ಪಟ್ಟಣದಲ್ಲಿ ಒಳಚರಂಡಿ ಹಾಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಈ ವರ್ಷದ ಬಜೆಟ್ಟಿನಲ್ಲಿ ಸೇರಿಸಲಾಗುವುದೆ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು)

ಅ) ಹೌದು

ಆ) ಬಸವಕಲ್ಯಾಣ ಪಟ್ಟಣಕ್ಕೆ ಅಭಿವೃದ್ಧಿ ನೀರು ಸರಬರಾಜು ಯೋಜನೆಯನ್ನು "ಚುಳುಕಿ ನಾಲಾ" ಜಲಮೂಲದಿಂದ ನಿಯೋಜಿಸಲಾಗಿದೆ. ಇದರ ಅಂದಾಜು ಪತ್ರಿಕೆಯನ್ನು ತಯಾರಿಸಲಾಗಿದ್ದು, ಇದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ತಾಂತ್ರಿಕ ಪರಿಶೀಲನೆಯಲ್ಲಿದೆ.

ಇ) ಬಸವಕಲ್ಯಾಣ ಪಟ್ಟಣದ ಅಭಿವೃದ್ಧಿ ನೀರು ಸರಬರಾಜು ಯೋಜನೆಯ ಅಂದಾಜು ಪಟ್ಟಿಯ ಮೊತ್ತ ರೂ. 318.55 ಲಕ್ಷ ಇರುತ್ತದೆ. ಈ ಪಟ್ಟಣಕ್ಕೆ ಒಳಚರಂಡಿ ಯೋಜನೆಯು ಸಾಧ್ಯತೆಯಿರುವುದಿಲ್ಲ. ಆದರೆ ಕಡಿಮೆ ವೆಚ್ಚದ ಶೌಚಾಲಯಗಳನ್ನು ನಿರ್ಮಿಸಬಹುದು.

ಈ) ಇಲ್ಲ.

ರಾಜ್ಯದ ಬೀಡಿ ಕಾರ್ಮಿಕರ ವೇತನ ಪುನರ್ ಪರಿಶೀಲನೆ

1302 - ಶ್ರೀ ವಿಜಯಕುಮಾರ ಶೆಟ್ಟಿ (ಸುರತ್ಕಲ್) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಬೀಡಿ ಕಾರ್ಮಿಕರ ಕನಿಷ್ಠ ವೇತನವನ್ನು ಪುನರ್ ಪರಿಶೀಲಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ?

ಆ) ಬೀಡಿ ಕಾರ್ಮಿಕರ ಕ್ಷೇಮಾಭ್ಯುದ್ಯಯಕ್ಕಾಗಿ ಸರ್ಕಾರ ಕೈಕೊಂಡಿರುವ ಕಾರ್ಯಕ್ರಮಗಳೇನು?

ಶ್ರೀ ಸಿ. ಎಸ್.ನಾಡಗೌಡ (ಕಾರ್ಮಿಕ ರಾಜ್ಯ ಸಚಿವರು):

ಅ) ಹೌದು

ಆ) ಸಂಬಳ ಸಹಿತ ರಜೆ, ಬೋನಸ್. ಹೆರಿಗೆ ಭತ್ಯೆ ರಜೆ, ವಸತಿ, ವೈದ್ಯಕೀಯ ಮತ್ತು ವಿದ್ಯಾರ್ಥಿವೇತನ ಸೌಲಭ್ಯಗಳು ಇತ್ಯಾದಿ.